## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ದರೆಗುಡ್ಡ ಗ್ರಾಮ ಪಂಚಾಯಿತಿ, ಮಂಗಳೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರು ಸಲ್ಲಿಸಿರುವ ಮೇಲ್ಮನವಿಯ ಬಗ್ಗೆ-ಆದೇಶ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ದಕ್ಷಿಣ ಕನ್ನಡ ಜಿಲ್ಲೆ, ರವರ ಆದೇಶ ಸಂಖ್ಯೆ:ದಕಜಿಪ/ಆಡಳಿತ/ಶಿಸ್ತು/ಸಿಆರ್-03/14-15(ಎ6), ದಿನಾಂಕ:15-05-2014.
2. ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರ ಮೇಲ್ಮನವಿ ದಿನಾಂಕ:12-08-2014.
3. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 499 ಗ್ರಾಪಂಕಾ 2014, ದಿನಾಂಕ: 06-11-2014,04-09-2015 ಮತ್ತು ದಿನಾಂಕ:28-06-2016.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ರವರ ಪತ್ರ ಸಂಖ್ಯೆ: ದಕಜಿಪ/ಆಡಳಿತ/ಶಿಸ್ತು/ಸಿಆರ್-30/2014-15(ಎ6), ದಿನಾಂಕ:19-09-2016.
5. ಸರ್ಕಾರದಿಂದ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿನಾಂಕ:07-11-2016, 06-01-2017 ಮತ್ತು 09-02-2017.

**ಪ್ರಸ್ತಾವನೆ :**

ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ದರೆಗುಡ್ಡ ಗ್ರಾಮ ಪಂಚಾಯಿತಿ, ಮಂಗಳೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರಿಗೆ ಗ್ರಾಮ ಪಂಚಾಯತಿಯ ಕರ ವಸೂಲಾತಿಯ ಪ್ರಗತಿ ಕುಂಠಿತವಾಗಿರುವ ಕಾರಣ ಕೇಳಿ ನೋಟೀಸ್ ನೀಡಲಾಗಿತ್ತು. ಅಲ್ಲದೇ ಈ ಬಗ್ಗೆ ಫೆಬ್ರವರಿ ತಿಂಗಳ ಮಾಸಿಕ ಸಭೆಯಲ್ಲಿ ಕರವಸೂಲಾತಿಯನ್ನು ಹೆಚ್ಚಿಸುವಂತೆ ಹಾಗೂ ಎಂಐಎಸ್‌ನಲ್ಲಿ ದಾಖಲಿಸುವಂತೆ ಸೂಚಿಸಿ ದಿನಾಂಕ:21-03-2014ರಂದು ಜರುಗಿದ ಸಭೆಯಲ್ಲಿ ಪ್ರಗತಿ ಕುಂಠಿತವಾಗಿರುವ ಬಗ್ಗೆ ಅಂತಿಮ ಎಚ್ಚರಿಕೆಯನ್ನು ನೀಡಿರುವುದಾಗಿಯೂ ಅಷ್ಟೇ, ಅಲ್ಲದೇ ಶೇ 100 ರಷ್ಟು ಪ್ರಗತಿ ಸಾಧಿಸಲು ವೈಯಕ್ತಿಕವಾಗಿ ದೂರವಾಣಿ ಮೂಲಕ ಸೂಚಿಸಿದ್ದರೂ ಕರವಸೂಲಾತಿಯಲ್ಲಿ ಪ್ರಗತಿ ಸಾಧಿಸುವಲ್ಲಿ ವಿಫಲಾಗಿರುತ್ತಾರೆ. ಆದ್ದರಿಂದ ಕರವಸೂಲಿಯಲ್ಲಿ ಶೇ 50ರಷ್ಟು ಪ್ರಗತಿ ಸಾಧಿಸಲೂ ವಿಫಲರಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಯವರು ಕೋರಿದ್ದರು.

ಆದ್ದರಿಂದ ಕರವಸೂಲಾತಿಯಲ್ಲಿ ಪ್ರಗತಿ ಸಾಧಿಸುವಲ್ಲಿ ವಿಫಲರಾದ ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ದರೆಗುಡ್ಡ ಗ್ರಾಮ ಪಂಚಾಯಿತಿ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 1957ರ ನಿಯಮ 8(iii)ರಂತೆ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಬೀರದಂತೆ ತಡೆಹಿಡಿಯುವಂತೆ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಮೇಲೆ ಓದಲಾದ (1)ರಲ್ಲಿ ಆದೇಶಿಸಿರುತ್ತಾರೆ.

ಮೇಲೆ ಓದಲಾದ (1)ರ' ಆದೇಶದ ವಿರುದ್ಧ ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ದಿನಾಂಕ:12-08-2014 ರಂದು ಕೆಸಿಎಸ್(ಸಿಸಿಎ)ನಿಯಮ 1957ರ ನಿಯಮ 18ರಡಿ ಮೇಲ್ಮನವಿ ಪ್ರಾಧಿಕಾರವಾದ ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿರುತ್ತಾರೆ.

ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿ ಅರ್ಜಿಗೆ ಸಂಬಂಧಿಸಿದಂತೆ ಕಂಡಿಕಾವಾರು ಷರಾವನ್ನು ಸಲ್ಲಿಸುವಂತೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ದಕ್ಷಿಣ ಕನ್ನಡ ಜಿಲ್ಲೆರವರಿಗೆ ಮೇಲೆ ಓದಲಾದ (3)ರ ಪತ್ರಗಳಲ್ಲಿ ತಿಳಿಸಲಾಗಿತ್ತು.

ಅದರಂತೆ ಮೇಲೆ ಓದಲಾದ(4) ಅನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ರವರು ಸರ್ಕಾರಕ್ಕೆ ಸಲ್ಲಿಸಲಾದ ಕಂಡಿಕಾವಾರು ವರಾದಲ್ಲಿ ಗ್ರಾಮ ಪಂಚಾಯತ್ ಗಳಲ್ಲಿ ತೆರಿಗೆ ಹಣ ಪಂಚಾಯತ್‌ನ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿರುವುದರಿಂದ ತೆರಿಗೆ ವಸೂಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ಆದ್ಯ ಕರ್ತವ್ಯವಾಗಿರುತ್ತದೆ. ಸದರಿ ಕರ್ತವ್ಯವನ್ನು ನಿರ್ವಹಿಸದೇ ನಿರ್ಲಕ್ಷ್ಯ ತೋರಿದ ಶ್ರೀ ಪ್ರಶಾಂತ್ ಶೆಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ದರೆಗುಡ್ಡ ಗ್ರಾಮ ಪಂಚಾಯಿತಿ, ಇವರಿಗೆ ಮುಂದಿನ ಒಂದು ವಾರ್ಷಿಕ ವೇತನಬಡ್ತಿಯನ್ನು ಸಂಚಿತವಿಲ್ಲದ ಪರಿಣಾಮದಂತೆ ತಡೆಹಿಡಿದು ಲಘು ದಂಡನೆ ವಿಧಿಸಿರುವುದು ಸೂಕ್ತವಾಗಿದೆ. ಆದ್ದರಿಂದ ಅರ್ಜಿದಾರರ ಮೇಲ್ಮನವಿಯನ್ನು ವಜಾಗೊಳಿಸಬೇಕಾಗಿ ಕೋರಿರುತ್ತಾರೆ.

ಈ ಮೇಲ್ಮನವಿಯ ಬಗ್ಗೆ ದಿನಾಂಕ:27-02-2017ರಂದು ವಿಚಾರಣೆಯನ್ನು ನಡೆಸಲಾಗಿದೆ. ದಿನಾಂಕ:27-02-2017ರಂದು ನಡೆದ ವಿಚಾರಣೆಗೆ ಅರ್ಜಿದಾರರು, ಜಿಲ್ಲಾ ಪಂಚಾಯಿತಿಯಿಂದ ಸಹಾಯಕ ಯೋಜನಾಧಿಕಾರಿಗಳಾದ ಶ್ರೀ ಸಚಿನ್ ಕುಮಾರ್‌ರವರು ಹಾಜರಾಗಿದ್ದರು.

ಮೇಲ್ಮನವಿ ಪ್ರಕರಣದಲ್ಲಿ ಜಿಲ್ಲಾ ಪಂಚಾಯಿತಿ, ಅರ್ಜಿದಾರರ ಹೇಳಿಕೆಗಳನ್ನು ಪಡೆಯಲಾಯಿತು. ಅರ್ಜಿದಾರರು ತೆರಿಗೆ ವಸೂಲಾತಿಯಲ್ಲಿ ಪ್ರಗತಿ ಸಾಧಿಸಿದ್ದು, ಇಂಟರ್‌ನೆಟ್ ತೊಂದರೆಯಿಂದಾಗಿ ಮಾರ್ಚ್ ತಿಂಗಳಲ್ಲಿ ಪಂಚತಂತ್ರಾಂಶದ ಎಂಐಎಸ್‌ನಲ್ಲಿ ದಾಖಲಿಸಲು ಸಾಧ್ಯವಾಗಿರುವುದಿಲ್ಲ. ನಂತರದ ದಿನಗಳಲ್ಲಿ ಪಂಚತಂತ್ರಾಂಶಕ್ಕೆ ಅಪ್‌ಲೋಡ್ ಮಾಡಿರುತ್ತೇನೆ ಎಂದು ಹೇಳಿಕೆ ನೀಡಿರುತ್ತಾರೆ. ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆ/ಕಡತಗಳನ್ನು ಪರಿಶೀಲಿಸಲಾಗಿದೆ. ಪಂಚತಂತ್ರಾಂಶದಲ್ಲಿ ಮೇ ತಿಂಗಳ 5ನೇ ದಿನಾಂಕದಂದು ಶೇ.50ರಷ್ಟು ಹಾಗೂ ವರ್ಷಾಂತ್ಯದ ವೇಳೆಗೆ ಒಟ್ಟಾರೆಯಾಗಿ ಶೇ 94ರಷ್ಟು ತೆರಿಗೆ ವಸೂಲಾತಿಯನ್ನು ಮಾಡಿರುವುದು ಕಂಡುಬಂದಿರುತ್ತದೆ. 2013-14ನೇ ಸಾಲಿಗೆ ದರೆಗುಡ್ಡ ಗ್ರಾಮಪಂಚಾಯಿತಿಯ ತೆರಿಗೆ ವಸೂಲಾತಿಯಲ್ಲಿ ಒಟ್ಟಾರೆ ಶೇ.90ಕ್ಕಿಂತ ಹೆಚ್ಚಿಗೆ ಪ್ರಗತಿ ಸಾಧಿಸಿರುವ ಹಿನ್ನೆಲೆಯಲ್ಲಿ ಶ್ರೀ ಪ್ರಶಾಂತ್ ಶೆಟ್ಟಿರವರಿಗೆ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಯವರು ವಿಧಿಸಿರುವ ದಂಡನಾದೇಶವು ಸಮಂಜಸವಲ್ಲ ಎಂದು ಸರ್ಕಾರವು ನಿರ್ಣಯಿಸಿದೆ.

ಆದುದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/499/ಗ್ರಾಪಂಕಾ/2014**
**ಬೆಂಗಳೂರು, ದಿನಾಂಕ:30-03-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ದಕ್ಷಿಣ ಕನ್ನಡ ಜಿಲ್ಲೆ ರವರ ಆದೇಶ ಸಂಖ್ಯೆ:ದಕಜಿಪ/ಆಡಳಿತ/ಶಿಸ್ತು/ಸಿಆರ್-03/14-15(ಎ6), ದಿನಾಂಕ:15-05-2014ರ ಆದೇಶವನ್ನು ರದ್ದುಪಡಿಸಿ, ವಾಗ್ದಂಡನೆ ವಿಧಿಸಿ ಆದೇಶಿಸಿದೆ.

**(ಪ್ರಧಾನ ಕಾರ್ಯದರ್ಶಿಯವರಿಂದ ಅನುಮೋದಿಸಿದೆ)**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ. ಅರುಣ್‌ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಮಂಗಳೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
4) ಸಂಬಂಧಿಸಿದ ನೌಕರರಿಗೆ
5) ಶಾಖಾ ರಕ್ಷಕ ಪ್ರತಿ
6) ಗಾರ್ಡ್ ಫೈಲ್